# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 300 (366)**
**ಸದಸ್ಯರ ಹೆಸರು : ಶ್ರೀ ಗೋವಿಂದರಾಜು (ವಿಧಾನ ಸಭಾ ಕ್ಷೇತ್ರದಿಂದ ಚುನಾಯಿತರಾದವರು)**
**ಉತ್ತರಿಸಬೇಕಾದ ದಿನಾಂಕ : 13.08.2025**
**ಉತ್ತರಿಸುವ ಸಚಿವರು : ಮಾನ್ಯ ಕಂದಾಯ ಸಚಿವರು**

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ (ಕೆಎಸ್ಎನ್‌ಡಿಎಂಸಿ) ಸಂಸ್ಥೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು: (ಪೂರ್ಣ ವಿವರ ನೀಡುವುದು) | ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಒಟ್ಟು 63 ಹುದ್ದೆಗಳನ್ನು ಸೃಜಿಸಲಾಗಿದ್ದು, ಈ ಪೈಕಿ ಪ್ರಸ್ತುತ 09 ಮೂಲ ಸಿಬ್ಬಂದಿ (Core Staff) ಗಳು, ಗುತ್ತಿಗೆ ಆಧಾರದ ಮೇಲೆ 22 ಮತ್ತು ಯೋಜನಾ ಅಧಾರದ ಮೇಲೆ 14 ಸಿಬ್ಬಂದಿಗಳು ಕಾರ್ಯ ನಿರ್ವಹಿಸುತ್ತಿದ್ದಾರೆ. |
| ಆ) | ಈ ಕೇಂದ್ರದ ಕಾರ್ಯಚಟುವಟಿಕೆಗಳೇನು ಪ್ರಸ್ತುತ ಎಲ್ಲಿ ಕಾರ್ಯನಿರ್ವಹಿಸುತ್ತಿವೆ ಇದಕ್ಕಾಗಿ ಸರ್ಕಾರ ಎಷ್ಟು ಎಕರೆ ಭೂ ಪ್ರದೇಶವನ್ನು ಮೀಸಲಿಟ್ಟಿದೆ; | ಸದರಿ ಕೇಂದ್ರವು ಪ್ರಮುಖವಾಗಿ, ರಾಜ್ಯದಲ್ಲಿ ಸಂಭವಿಸುವ ನೈಸರ್ಗಿಕ ವಿಪತ್ತುಗಳ ಉಸ್ತುವಾರಿ ಜವಾಬ್ದಾರಿ ಹೊಂದಿದ್ದು, ವಿಪತ್ತುಗಳ ವೈಜ್ಞಾನಿಕ ವಿಶ್ಲೇಷಣೆ, ವಿಪತ್ತು ಪೀಡಿತ ಪ್ರದೇಶಗಳನ್ನು ಗುರುತಿಸಿ ನಕ್ಷೆ ಮತ್ತು ವರದಿಗಳನ್ನು ಸಿದ್ಧಪಡಿಸುವುದು.<br><br>ರಾಜ್ಯದಾದ್ಯಂತ ಸ್ಥಾಪಿಸಲಾಗಿರುವ ದೂರಸ್ಥ ಟೆಲಿಮೆಟ್ರಿಕ್ ಮಳೆ ಮಾಪನ ಮತ್ತು ಹವಾಮಾನ ಮಾಪನ ಕೇಂದ್ರಗಳ ಜಾಲದ ಸ್ಥಾಪನೆ ಮತ್ತು ನಿರ್ವಹಣೆಯೊಂದಿಗೆ ರಾಜ್ಯದಲ್ಲಿ ಕಂಡುಬರುವ ಭೂಕಂಪನಗಳ ನಿಗಾ ವಹಿಸಲು ಭೂಕಂಪನ ಮಾಪನಗಳ ಸ್ಥಾಪನೆ, ಸಿಡಿಲು ಬಡಿತ ಪರಿಣಾಮಗಳನ್ನು ಅಧ್ಯಯನಕ್ಕಾಗಿ ಸಿಡಿಲು ಸಂವೇದಕ ಸ್ಥಾಪನೆ ಮತ್ತು ನಿರ್ವಹಣೆಯ ಜೊತೆಗೆ ಭೂಕಂಪನ, ಭೂಕುಸಿತ, ಸಿಡಿಲು ಬಡಿತ ಹಾಗೂ ರಾಜ್ಯದಲ್ಲಿನ ಹವಾಮಾನ ವೈಪರೀತ್ಯಗಳ ಅಧ್ಯಯನ, ಹವಾಮಾನ ಮುನ್ಸೂಚನೆ, ಮುನ್ನೆಚ್ಚರಿಕೆ ಸಲಹೆ ಸೂಚನೆಗಳನ್ನು ನೀಡಲಾಗುತ್ತಿದೆ. |

| | | |
|---|---|---|
| | | ಅಲ್ಲದೇ, ರಾಜ್ಯದಲ್ಲಿ ಕಂಡುಬರುವ ನೈಸರ್ಗಿಕ ವಿಕೋಪಗಳನ್ನು ವೈಜ್ಞಾನಿಕವಾಗಿ ವಿಶ್ಲೇಷಣೆಯೊಂದಿಗೆ ವಿಪತ್ತು ಪರಿಹಾರ ಕಾರ್ಯಗಳಿಗೆ ಕೇಂದ್ರದಿಂದ ಹಣಕಾಸು ನೆರವು ಕೋರಿ ಮೆಮೊರಾಡಂ ಸಿದ್ಧಪಡಿಸುವುದು, ವಿಪತ್ತು ನಿರ್ವಹಣೆ ಸಂಬಂದ ಸಾಮರ್ಥ್ಯಾಭಿವೃದ್ಧಿ ಮತ್ತು ಇನ್ನಿತರ ಕಾರ್ಯಚಟುವಟಿಕೆಗಳನ್ನು ನಿರ್ವಹಿಸುತ್ತಿದೆ.<br><br>ಈ ಕೇಂದ್ರವು ಪ್ರಸ್ತುತ ಜಿ.ಕೆ.ವಿಕೆ. ಆವರಣ ಯಲಹಂಕ ನ್ಯೂಟೌನ್ ಬೆಂಗಳೂರಿನಲ್ಲಿರುವ ಗಾಂಧಿ ಕೃಷಿ ವಿಶ್ವವಿದ್ಯಾನಿಲಯ ಒಡೆತನದಲ್ಲಿರುವ ಸುಮಾರು 10 ಎಕರೆ ವ್ಯಾಪ್ತಿ ವಿಸ್ತೀರ್ಣದಲ್ಲಿ ಕಾರ್ಯ ನಿರ್ವಹಿಸುತ್ತಿದೆ. |
| ಇ) | ಮಳೆ ಮಾಪಕ, ಮಿಂಚಿನ ಸಂವೇಕಗಳು ಮುಂಬರುವ ಅಪಾಯದ ಬಗ್ಗೆ ಜನರಿಗೆ ಎಚ್ಚರಿಕೆ ನೀಡುತ್ತಿದೆ; ಆದರೆ ಇಲ್ಲಿರುವ ಬಹುತೇಕ ಮಾಪನಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರವು ರಾಜ್ಯದಾದ್ಯಂತ ವಿವಿಧ ಹಂತಗಳಲ್ಲಿ ಟೆಲಿಮೆಟ್ರಿಕ್ ಮಳೆಮಾಪನ ಮತ್ತು ಹವಾಮಾನ ಮಾಪನ ಕೇಂದ್ರಗಳ ಜಾಲ ಮತ್ತು ಸಿಡಿಲು ಸಂವೇದಕ ಸ್ಥಾಪಿಸಲಾಗಿದ್ದು, ಪ್ರಸ್ತುತ ವಾರ್ಷಿಕ ನಿರ್ವಹಣೆ ಗುತ್ತಿಗೆ ಅವಧಿಯಲ್ಲಿರುವ ದೂರಸ್ಥ ಟೆಲಿಮೆಟ್ರಿಕ್ ಮಳೆಮಾಪನ ಮತ್ತು ಹವಾಮಾನ ಮಾಪನ ಕೇಂದ್ರಗಳು ಸಮರ್ಥವಾಗಿ ಕಾರ್ಯ ನಿರ್ವಹಿಸುತ್ತಿದೆ.<br><br>ಅಳವಡಿಸಿರುವ ಟೆಲಿಮೆಟ್ರಿಕ್ ಮಳೆಮಾಪನ ಕೇಂದ್ರಗಳ ಪೈಕಿ ಸಮರ್ಪಕವಾಗಿ ಕಾರ್ಯನಿರ್ವಹಿಸದ ಸುಮಾರು 1,530 ಮಳೆಮಾಪನ ಕೇಂದ್ರಗಳ ಉಪಕರಣಗಳನ್ನು ರೂ.1989.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಹೊಸದಾಗಿ ಸ್ಥಾಪಿಸಲು ದಿನಾಂಕ:28/07/2025 ರ ಸರ್ಕಾರದ ಆದೇಶದಲ್ಲಿ ಅನುಮೋದನೆಯನ್ನು ನೀಡಲಾಗಿದ್ದು, ಅದರಂತೆ, ಪ್ರಸ್ತುತ ಟೆಂಡರ್ ಪ್ರಕ್ರಿಯೆ ಚಾಲ್ತಿಯಲ್ಲಿದೆ. |
| ಈ | ಹಾಗಿದ್ದಲ್ಲಿ ಇದರಿಂದಾಗುವ ದುಷ್ಪರಿಣಾಮಗಳಿಗೆ ಯಾರು ಹೊಣೆ ಸರಿಯಾದ ಮೂಲಸೌಕರ್ಯಗಳನ್ನು ಒದಗಿಸಲು ಸರ್ಕಾರಕ್ಕೆ ಇರುವ ತೊಂದರೆ ಏನು? | |

**ಕಡತ ಸಂಖ್ಯೆ:** ಕಂಇ 316 ಟಿಎನ್‌ಆರ್ 2025

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು